ವಿಷಯ : ಸೌಲಭ್ಯಗಳ ಮಂಜೂರಾತಿ

433

ಶ್ರೀ ಮಂಜುನಾಥ್ ಹೆಚ್.ಪಿ (ಹುಣಸೂರು)

ಅ) ಮೈಸೂರು ಜಿಲ್ಲೆ ತಾಲ್ಲೂಕುಗಳಿಗೆ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ 2008–09ನೇ ಸಾಲಿನಿಂದ 2011–12ನೇ ಸಾಲಿನವರೆಗೆ ಮೈಸೂರು ಜಿಲ್ಲೆಗೆ ನಿಗದಿ ಪಡಿಸಿದ ಗುರಿಯೆಷ್ಟು;

ಆ) ನಿಗಧಿ ಪಡಿಸಿದ ಗುರಿಗೆ ಪ್ರಗತಿಯನ್ನು ಸಾಧಿಸಲಾಗಿದೆಯೇ ವಿವರ ನೀಡುವುದು'

ಇ) 2009–10ನೇ ಸಾಲಿನಿಂದ ಇಲ್ಲಿಯವರೆಗೂ ತಾಲ್ಲೂಕು ಮಟ್ಟದ ಆಯ್ಕೆ ಸಮಿತಿಯಿಂದ ನೇರಸಾಲ, ಮೈಕ್ರೋ ಕ್ರೆಡಿಟ್ ಸಾಲ, ಸ್ವಯಂ ಉದ್ಯೋಗ ಹಾಗೂ ಉದ್ಯಮ ಶೀಲತಾ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಪೂರ್ಣ ಪ್ರಮಾಣದಲ್ಲಿ ಸವಲತ್ತುಗಳನ್ನು ವಿತರಿಸದೇ ಇರಲು ಕಾರಣವೇನು;

ಈ) ಎರಡು ವರ್ಷದಿಂದ ಸವಲತ್ತುಗಳಿಂದ ಫಲಾನುಭವಿಗಳು ವಂಚಿತರಾಗಿರುವುದಕ್ಕೆ ಯಾರು ಹೊಣೆ ಮತ್ತು ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಳ್ಳಲಾಗುವುದು?

ಸಮಾಜ ಕಲ್ಯಾಣ ಹಾಗೂ ಬಂಧೀಖಾನೆ ಸಚಿವರು

ಅ) 2008–09ನೇ ಸಾಲಿನಿಂದ 2011–12ನೇ ಸಾಲಿನ ವರೆಗೆ ಮೈಸೂರು ಜಿಲ್ಲೆಗೆ ಸ್ವಯಂ ಉದ್ಯೋಗ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧೀ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ ಮತ್ತು ನೇರ ಸಾಲ ಯೋಜನೆಯಡಿ ಮೈಸೂರು ಜಿಲ್ಲೆಗೆ ಒಟ್ಟು 1667 ಭೌತಿಕ ಗುರಿ ನಿಗದಿಪಡಿಸಲಾಗಿತ್ತು. ವರ್ಷವಾರು ವಿವರಗಳು ಈ ಕೆಳಗಿನಂತಿದೆ.

2008–09	456
2009–10	558
2010–11	469
2011–12	184
ಒಟ್ಟು	**1667**

ಆ) ಮೈಸೂರು ಜಿಲ್ಲೆಗೆ ಸಂಬಂಧಪಟ್ಟಂತೆ ಸ್ವಯಂ ಉದ್ಯೋಗ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ ಮತ್ತು ನೇರ ಸಾಲ ಯೋಜನೆಯಡಿ 2008–09 ನೇ ಸಾಲಿನಿಂದ 2011–12ನೇ ಸಾಲಿನ ವರೆಗೆ ಒಟ್ಟು 1133 ಫಲಾಪೇಕ್ಷಿಗಲಿಗೆ ಸೌಲಭ್ಯ ಕಲ್ಪಿಸಲಾಗಿದ್ದು, ವಿವರಗಳು ಈ ಕೆಳಗಿನಂತಿದೆ.

2008–09	463
2009–10	144
2010–11	390
2011–12	136
ಒಟ್ಟು	**1133**

ಇ) ಮತ್ತು ಈ) ಆಯವ್ಯಯದಲ್ಲಿ ಹಂಚಿಕೆ ಮಾಡುವ ಅನುದಾನ ಮತ್ತು ಷೇರು ಬಂಡವಾಳಕ್ಕೆ ಅನುಗುಣವಾಗಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆಯನ್ನಾಧರಿಸಿ ವಿವಿಧ ಯೋಜನೆಗಳಡಿಯಲ್ಲಿ ಜಿಲ್ಲಾವಾರು ಭೌತಕ ಮತ್ತು ಆರ್ಥಿಕ ಗುರಿಯನ್ನು ನಿಗದಿಪಡಿಸಲಾಗುತ್ತದೆ. ನಿಗಮವು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಲ್ಲಿ ಸ್ವಯಂ ಉದ್ಯೋಗ ಯೋಜನೆ ಮತ್ತು ಉದ್ಯಮ ಶೀಲತಾ ಯೋಜನೆಯು ಬ್ಯಾಂಕ್‌ಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಹಾಗೆಯೇ ನೇರ ಸಾಲ ಯೋಜನೆಯನ್ನು ರಾಷ್ಟ್ರೀಯ ಪರಿಶಿಷ್ಟ ಪಂಗಡಗಳ ಹಣಕಾಸು ಮತ್ತು ಅಭಿವೃದ್ಧಿ ನಿಗಮ, ನವದೆಹಲಿ, ಇದರ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಸ್ವಯಂ ಉದ್ಯೋಗ ಮತ್ತು ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆಯಡಿ ಬ್ಯಾಂಕುಗಳಿಂದ ನಿರೀಕ್ಷಿತ ಮಟ್ಟದಲ್ಲಿ ಮಂಜೂರಾತಿ ದೊರಕದೆ ಇರುವ ಕಾರಣ ನಿಗದಿಪಡಿಸಾಗಿರುವ ಗುರಿಗೆ ತಕ್ಕಂತೆ ಪ್ರಗತಿ ಸಾಧಿಸಲು ಸಾಧ್ಯವಾಗಿರುವುದಿಲ್ಲ. ಇದೇ ರೀತಿ ರಾಷ್ಟ್ರೀಯ ನಿಗಮದಿಂದ ವಿರೀಕ್ಷಿತ ಅವಧಿ ಸಾಲ ದೊರೆಯದೇ ಇರುವ ಕಾರಣ ನೇರ ಸಾಲ ಯೋಜನೆಯಡಿಯಲ್ಲಿಯೂ ನಿರೀಕ್ಷಿತ ಪ್ರಗತಿ ಸಾಧಿಸಲು ಸಾಧ್ಯವಾಗಿರುವುದಿಲ್ಲ.

ಸಕಇ 235 ಬಿಎಂಎಸ್2012

(ಎ. ನಾರಾಯಣ ಸ್ವಾಮಿ)
ಸಮಾಜ ಕಲ್ಯಾಣ ಹಾಗೂ
ಬಂಧೀಖಾನೆ ಸಚಿವರು